**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.1305/2023**

**ಪಿರ್ಯಾದುದಾರರು** ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

**-ವಿರುದ್ಧ-**

**ಆರೋಪಿ/ತರು** ಃ ಕೆ ಪ್ರಶಾಂತ್ ಮತ್ತು ಇನ್ನೊಬ್ಬರು

**-ಃದೋಷಾರೋಪಣೆಃ-**

**ಶ್ರೀ ವೈದ್ಯ ಶ್ರೀಕಾಂತ್,** ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

1. ಕೆ.ಪ್ರಶಾಂತ ಬಿನ್ ಎಸ್ ಎನ್ ಕೃಷ್ಣಮೂರ್ತಿ, 36 ವರ್ಷ, ವ್ಯವಸಾಯ, ವಾಸಃಹುರುಳಿಹಳ್ಳಿ ಗ್ರಾಮ, ತರೀಕೆರೆ ತಾಃ
2. ಕೃಷ್ಣಮೂರ್ತಿ ಬಿನ್ ಲೇಟ್ ವಿ ಎಸ್ ನಾಗಪ್ಪ, 65 ವರ್ಷ, ವ್ಯವಸಾಯ, ವಾಸಃಹುರುಳಿಹಳ್ಳಿ ಗ್ರಾಮ, ತರೀಕೆರೆ ತಾಃ ವಿದ್ಯಾರ್ಥಿ, ಎಂ ಸಿ ಹಳ್ಳಿ ಗ್ರಾಮ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಹುರುಹಳ್ಳಿ ಗ್ರಾಮದಲ್ಲಿ ಚಾಸಾ-1 ರವರು ಅವರ ಸೈಟಿನಲ್ಲಿ ಮನೆ ಕಟ್ಟುತ್ತಿದ್ದು, ದಿಃ02.04.2023 ರಂದು ಮಧ್ಯಾಹ್ನ 12-00 ರ ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ರವರ ಜಮೀನಿಗೆ/ಸೈಟ್ ಗೆ ಅತೀಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.447 ಸಹಕಲಂ 34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು ಕುಡಿಯುವ ನೀರಿಗೆ ಬೋರ್ ಹಾಕಿಸಿಕೊಂಡಿದ್ದು, ಅದರಿಂದ ಚಾಸಾ-1 ರವರ ಜಮೀನಿಗೆ ನೀರು ತೆಗೆದುಕೊಂಡು ಹೋಗಲು ಚಾಸಾ-1 ರವರ ಸೈಟ್ ಗೆ ಪೈಪ್ ಲೈನ್ ಅಳವಡಿಸಿಕೊಂಡಿದ್ದು, ಅದನ್ನು ತೆಗೆದು ಬೇರೆ ಕಡೆ ಹಾಕಿಕೊಳ್ಳುವಂತೆ ಹೇಳಿ, ಚಾಸಾ-1 ರವರ ಚಿಕ್ಕಮ್ಮನ ಮಗನಾದ ರಂಗನಾಥ ಮತ್ತು ಸತೀಶ್ ಪಿ ಎಂಬುವವರನ್ನು ಕರೆದು ತೋರಿಸಿ ಹೇಳಿದ್ದಕ್ಕೆ ಆರೋಪಿತರಾದ ನೀವು ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.504 ಸಹಕಲಂ 34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ರವರ ಕಪಾಳಕ್ಕೆ ಕೈಯಿಂದ ಹೊಡೆದು, ಕೆಳಗೆ ಬೀಳಿಸಿಕೊಂಡು ಕಾಲಿನಿಂದ ತುಳಿದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.323 ಸಹಕಲಂ 34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ನೀಲಗಿರಿ ದೊಣ್ಣೆಯಿಂದ ಚಾಸಾ-1 ರವರಿಗೆ ಹಲ್ಲೆ ಮಾಡಿ, ಎಡಗೈ ಹಿಂಭಾಗಕ್ಕೆ ಬಲವಾಗಿ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.324 ಸಹಕಲಂ 34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಆರೋಪಿತರಾದ ನೀವು ಚಾಸಾ-1 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆಯ ಕಲಂ.504**

**ಸಹಕಲಂ 34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ15.07.2024

Sd/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1)ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉಃ ಎ-1

ಎ-2

ಪ್ರಃ 2)ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ ಎ-1

ಎ-2

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ15.07.2024

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ